**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ/32/ಹೆಚ್‌ಪಿಯು/2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ 08.02.2017.

**'ನೆನಪೋಲೆ'**

**ಇವರಿಂದ,**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಉನ್ನತ ಶಿಕ್ಷಣ ಇಲಾಖೆ.

**ಇವರಿಗೆ,**

1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.

JD (Plan)/DVP(E)/SPS/ACA
SCH | Bldg/E.Gov
Goty ಕ್ರ ಎನ್ನ
9/2/2017

ಮಾನ್ಯರೆ,

**ವಿಷಯ: 2016-17ನೇ ಸಾಲಿನಲ್ಲಿ ಒದಗಿಸಲಾದ ಅನುದಾನವನ್ನು ಸಂಪೂರ್ಣವಾಗಿ ಬಳಸಿಕೊಳ್ಳುವ ಬಗ್ಗೆ.**
**ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 02 ಯೋಜನೆ 2017 ದಿ: 30.01.2017.**

ಮೇಲಿನ ವಿಷಯ ಹಾಗೂ ಉಲ್ಲೇಖಿತ ಪತ್ರದೆಡೆಗೆ ತಮ್ಮ ಗಮನ ಸೆಳೆಯಲಾಗಿದೆ. ತಮ್ಮ ಇಲಾಖೆಯಿಂದ 2016-17ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆಯವಾರು ಬಿಡುಗಡೆ ಮಾಡಲಾದ ಅನುದಾನ (ಟೋಕನ್ ಸಂಖ್ಯೆಯೊಂದಿಗೆ) ಹಾಗೂ ಬಿಡುಗಡೆಯಾಗದೆ ಉಳಿದಿರುವ ಅನುದಾನದ ವಿವರಗಳನ್ನು ಯಾವ ಕಾರಣಕ್ಕಾಗಿ ವಿಳಂಬವಾಗಿದೆ ಎಂಬ ಮಾಹಿತಿಯೊಂದಿಗೆ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಹಾಗೂ ಯಾವುದೇ ಲೆಕ್ಕ ಶೀರ್ಷಿಕೆಯಡಿ ಪುನರ್‌ವಿನಿಯೋಗಕ್ಕೆ ಪ್ರಸ್ತಾವನೆಗಳಿದ್ದಲ್ಲಿ ಅಂತಹ ಪ್ರಸ್ತಾವನೆಗಳನ್ನು ತಕ್ಷಣವೇ ಸರ್ಕಾರಕ್ಕೆ ಸಲ್ಲಿಸುವಂತೆ ಉಲ್ಲೇಖಿತ ಪತ್ರದಲ್ಲಿ ಈಗಾಗಲೇ ಕೋರಲಾಗಿದೆ.

ಮುಂದುವರೆದು, ಅನುಸೂಚಿತ ಜಾತಿಗಳ ಉಪಯೋಜನೆಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆಯಡಿ ಬಳಕೆಯಾಗದೆ ಉಳಿದ ಅನುದಾನವನ್ನು ಖಜಾನೆ-1ರಡಿ ಸೆಳೆದು ಆದ್ಯತೆ ಮೇರೆಗೆ ಸಂಪೂರ್ಣವಾಗಿ ವೆಚ್ಚ ಮಾಡುವುದು. ಖಜಾನೆ-2 ರಡಿ ಅನುದಾನ ಬಿಡುಗಡೆ ಮಾಡುವಲ್ಲಿ ಯಾವುದೇ ಸಮಸ್ಯೆಗಳಿದ್ದಲ್ಲಿ ಅದನ್ನು ಕೂಡಲೇ ಸರ್ಕಾರದ ಉಪ ಕಾರ್ಯದರ್ಶಿ (ಯೋಜನೆ) ಉನ್ನತ ಶಿಕ್ಷಣ ಇಲಾಖೆ ಇವರ ಗಮನಕ್ಕೆ ತರತಕ್ಕದ್ದು. ಯಾವುದೇ ಲೆಕ್ಕ ಶೀರ್ಷಿಕೆಯಡಿ ಅನುದಾನ ವ್ಯಪಗತವಾದಲ್ಲಿ ಆಯಾ ಇಲಾಖೆಗೆ ಸಂಬಂಧಪಟ್ಟ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೇ ಜವಾಬ್ದಾರರಾಗಿರುತ್ತಾರೆಂದು ತಮಗೆ ತಿಳಿಸುವಂತೆ ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

**(ಅಪರ್ಣಾ ಪಾವಟೆ)**
ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ
ಸರ್ಕಾರದ ಉಪ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ (ಯೋಜನೆ)

Received
10/02/2017
@ 3.00pm